ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಸಭಾಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಈ ಸಂಜೆ ಎಕ್ಸ್‌ಪ್ರೆಸ್ ದಿನಾಂಕ : DATE : 27/11/20

# ಸಭಾಪತಿ ಪ್ರತಾಪಚಂದ್ರ ಶೆಟ್ಟಿ ವಿರುದ್ಧ ಬಿಜೆಪಿ ಅವಿಶ್ವಾಸ

## ನಿರ್ಣಯ ಮಂಡನೆ ಕೋರಿ ಶಾಸಕರಿಂದ ಮನವಿ ಸಲ್ಲಿಕೆ



ಬೆಂಗಳೂರು: ನಿರೀಕ್ಷಿಸಿದಂತೆ ವಿಧಾನಪರಿಷತ್ ಸಭಾಪತಿ ಕೆ. ಪ್ರತಾಪಚಂದ್ರಶೆಟ್ಟಿ ಅವರ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಕೋರಿ ಬಿಜೆಪಿ ಸದಸ್ಯರು ಮೇಲ್ಮನೆ ಕಾರ್ಯದರ್ಶಿಗೆ ಮನವಿ ಸಲ್ಲಿಸಿದ್ದಾರೆ. ಆಯನೂರು ಮಂಜುನಾಥ್, ವೈ. ಎ. ನಾರಾಯಣಸ್ವಾಮಿ ಸೇರಿದಂತೆ ಹಲವು ಸದಸ್ಯರು, ಸಭಾಪತಿ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸಲು ಅವಕಾಶ ಕೋರಿದ್ದಾರೆ. ಡಿಸೆಂಬರ್ 7ರಿಂದ 15ರವರೆಗೆ ನಡೆಯಲಿರುವ ಅಧಿವೇಶನದ ವೇಳೆ ಬಿಜೆಪಿ ಸದಸ್ಯರು ಕೋರಿರುವ ಸೂಚನೆ ಮೇರೆಗೆ ಸಭಾಪತಿಗಳು ನಿರ್ಣಯ ಮಂಡಿಸಲಿದ್ದಾರೆ.

ಈ ಹಿಂದಿನ ಜೆಡಿಎಸ್ ಹಾಗೂ ಕಾಂಗ್ರೆಸ್ ಸಮ್ಮಿಶ್ರ ಸರ್ಕಾರದ ಅವಧಿಯಲ್ಲಿ ಶೆಟ್ಟಿ ಅವರನ್ನು ಸಭಾಪತಿಯಾಗಿ ಆಯ್ಕೆ ಮಾಡಲಾಗಿತ್ತು. ಉಪಸಭಾಪತಿಯಾಗಿ ಜೆಡಿಎಸ್‌ನ ಎಲ್.ಎಸ್. ಧರ್ಮೇಗೌಡ ಅವರನ್ನು ಆಯ್ಕೆ ಮಾಡಲಾಗಿತ್ತು. ಆದರೆ ಈಗ ಜೆಡಿಎಸ್ ಮತ್ತು ಕಾಂಗ್ರೆಸ್ ನಡುವಿನ ಸಂಬಂಧ ಹಳಸಾಗಿದೆ. ಸದ್ಯ ಜೆಡಿಎಸ್ ಹಾಗೂ ಬಿಜೆಪಿ ನಡುವೆ ಸ್ನೇಹ ಚಿಗುರಿದೆ. ಮೇಲ್ಮನೆಯಲ್ಲಿ ಬಿಜೆಪಿ ಬಲ ಇತ್ತೀಚಿನ ಚುನಾವಣೆಯಲ್ಲಿ ಹೆಚ್ಚಿದೆ. ಈ ಎಲ್ಲ ಅಂಶಗಳ ಹಿನ್ನೆಲೆಯಲ್ಲಿ ಶೆಟ್ಟಿ ಅವರನ್ನು ಕೆಳಗಿಳಿಸಿ ಬಿಜೆಪಿ ಸದಸ್ಯರನ್ನು ಆಯ್ಕೆ ಮಾಡಲು ಮುಂದಾಗಿದೆ. ಅವಿಶ್ವಾಸ ನಿರ್ಣಯಕ್ಕೆ ಬೆಂಬಲಿಸಿದ್ದಕ್ಕೆ ಪ್ರತಿಯಾಗಿ ಧರ್ಮೇಗೌಡರನ್ನು ಉಪಸಭಾಪತಿಯಾಗಿ ಮುಂದುವರೆಸುವ ಸಾಧ್ಯತೆ ಇದೆ.